ಅ) ಬೆಂಗಳೂರಿನ ಕೆ.ಸಿ.ಜನರಲ್ ಆಸ್ಪತ್ರೆಯಲ್ಲಿ ಬ್ಲಡ್ ಬ್ಯಾಂಕ್ ಸ್ಥಾಪಿಸಲಾಗಿದೆಯೆ?

ಆ) ಹಾಗಿಲ್ಲದಿದ್ದಲ್ಲಿ ಈ ಆಸ್ಪತ್ರೆಯಲ್ಲಿ ಬ್ಲಡ್‌ಬ್ಯಾಂಕ್ ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೆ?

ಇ) ಈ ಆಸ್ಪತ್ರೆಗೆ ಪ್ರತಿದಿನ ಬೇಕಾಗುವ ಸರಾಸರಿ ರಕ್ತದ ಬೇಡಿಕೆ ಎಷ್ಟು?

ಡಾ. ಎ.ಬಿ. ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಆಗಿದೆ.

ಆ) ಉದ್ಭವಿಸುವುದಿಲ್ಲ

ಇ) ದಿನವಹಿ 5 ರಿಂದ 7 ಶೀಶೆಗಳು.

ಸರ್ಕಾರಿ ಆಸ್ಪತ್ರೆಗಳಿಗೆ ಆಧುನಿಕ ಉಪಕರಣ ನೀಡುವ ಕುರಿತು.

2382(2937)

ಶ್ರೀ ರಾಮಲಿಂಗಾರೆಡ್ಡಿ(ಜಯನಗರ): ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಬೆಂಗಳೂರಿನ ವಿಕ್ಟೋರಿಯಾ ಹಾಗೂ ಬೌರಿಂಗ್ ಮತ್ತು ಲೇಡಿಕರ್ಜನ್ ಆಸ್ಪತ್ರೆಗಳಿಗೆ ಸರ್ಕಾರ ಆಧುನಿಕ ವೈದ್ಯಕೀಯ ಉಪಕರಣಗಳನ್ನು ನೀಡಲು ಕ್ರಮ ಕೈಗೊಂಡಿದೆಯೇ?

2. ಹಾಗಿದ್ದಲ್ಲಿ ಹೊಸದಾಗಿ ಈ ಆಸ್ಪತ್ರೆಗಳಿಗೆ 2000-2001ರಲ್ಲಿ ಒದಗಿಸಲಿರುವ ಉಪಕರಣಗಳು ಯಾವುವು?

3. ಇದಕ್ಕಾಗಿ ಖರ್ಚು ಮಾಡಲಿರುವ ಹಣ ಎಷ್ಟು?

ಶ್ರೀಮತಿ ನಫೀಸ್ ಫಜಲ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು):

ಅ) ಹೌದು.

ಆ) ಭಾರತೀಯ ವೈದ್ಯಕೀಯ ಪರಿಷತ್ತಿನ ನಿಯಮಾನುಸಾರ ಈ ಆಸ್ಪತ್ರೆಗಳಿಗೆ ಖರೀದಿಸುವ ಉಪಕರಣಗಳ ಏವರಗಳನ್ನು ಮುಂದೆ ಅಂತಿಮಗೊಳಿಸಲಾಗುವುದು.

ಇ) 2000-2001ನೇ ಸಾಲಿನ ಆರ್ಥಿಕ ವರ್ಷದಲ್ಲಿ ಸರ್ಕಾರವು ರೂ.2 ಕೋಟಿಗಳನ್ನು ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯಕ್ಕೆ ಹೊಂದಿಕೊಂಡ ಆಸ್ಪತ್ರೆಗಳಿಗಾಗಿ ನಿಗದಿಪಡಿಸಿದೆ.

ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಸರ್ಕಾರಿ ಸೌಲಭ್ಯಗಳ ದುರುಪಯೋಗ.

2383(3055)

ಶ್ರೀ ರಾಜೇಂದ್ರ ವರ್ಮ(ಹುಲಸೂರು): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಳವಳ್ಳಿ ತಾಲ್ಲೂಕು ಬಿ.ಜಿ.ಪುರದಲ್ಲಿರುವ(ಬೊಪ್ಪಗೌಡನ ಪುರ) ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಕಳೆದ 3 ವರ್ಷಗಳಿಂದ ಎಷ್ಟು ಜನ ಪರಿಶಿಷ್ಟ ಜಾತಿ ಹಾಗೂ ವರ್ಗದ ವಿದ್ಯಾರ್ಥಿಗಳಿಗೆ ಹಾಗೂ ಇತರರಿಗೆ ಉಚಿತ ಪಠ್ಯಪುಸ್ತಕಗಳು, ಸಮವಸ್ತ್ರ ಹಾಗೂ ಪ್ರತಿ ತಿಂಗಳು ನೀಡಲಾಗಿರುವ 3 ಕೆ.ಜಿ. ಅಕ್ಕಿಯನ್ನು ನೀಡಲಾಗಿದೆ, ಮತ್ತು ಇದಕ್ಕಾಗಿ ವೆಚ್ಚ ಮಾಡಲಾಗಿರುವ ಹಣವೆಷ್ಟು?

ಆ) ಈ ರೀತಿ ನೀಡಿರುವ ಉಚಿತ ಸೌಲಭ್ಯಗಳ ಪೈಕಿ ಉಚಿತವಾಗಿ ನೀಡುವ ಅಕ್ಕಿ ಹಾಗೂ ಸಮವಸ್ತ್ರಗಳು ಬಡ ವಿದ್ಯಾರ್ಥಿಗಳಿಗೆ ತಲುಪದೇ ಈ ಶಾಲೆಯ ಮುಖ್ಯೋಪಾಧ್ಯಾಯರು ಮಾರಾಟ ಮಾಡಿಕೊಂಡಿರುವ ಬಗ್ಗೆ ದೂರುಗಳಿರುವುದು ನಿಜವೆ?

ಇ) ಹಾಗಿದ್ದಲ್ಲಿ 3 ವರ್ಷಗಳಲ್ಲಿ ಮೇಲ್ಕಂಡ ಸೌಲಭ್ಯಗಳು ವಿದ್ಯಾರ್ಥಿಗಳಿಗೆ ಸರಿಯಾಗಿ ತಲುಪಿದೆಯೆ, ಅಥವಾ ಇಲ್ಲವೇ ಎನ್ನುವ ಬಗ್ಗೆ ಇಲಾಖಾ ತನಿಖೆಗೆ ಆದೇಶ ನೀಡಲಾಗುವುದೇ?

ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):

ಅ)

	ಪ ಜಾ	ಪ ಪಂ	ಇತರರು	ವೆಚ್ಚ
ಸಮವಸ್ತ್ರ	468	--	154	50480.00
ಪಠ್ಯಪುಸ್ತಕ	640	--	215	31415.90
ಅಕ್ಕಿ	ಒಟ್ಟು ಫಲಾನುಭವಿಗಳು 800			146842.00